ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು

(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ ⋆ ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)
'ಉತ್ಕೃಷ್ಟತಾ ಅಂತಃಸಾಮರ್ಥ್ಯ ಉಳ್ಳ' ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ
ಭಾರತ ಸರ್ಕಾರದ ಡಿಬಿಟಿಯಿಂದ "ಸ್ಟಾರ್ ಕಾಲೇಜ್ ಸ್ಕೀಮ್" ಅಡಿಯಲ್ಲಿ ಗುರುತಿಸಲ್ಪಟ್ಟಿದೆ
ಊಟಿರಸ್ತೆ, ಮೈಸೂರು-570 025, ಕರ್ನಾಟಕ

ESTD - 1964

☎ 0821-2548236 & 2548380 Fax: 0821-2548238 E-mail: jssautonomous@gmail.com

**ದಿನಾಂಕ: 24–12–2014**

## ಪ್ರಕಟಣೆಯ ಕೃಪೆಗಾಗಿ

## ಜೆಎಸ್‌ಎಸ್ ಕಾಲೇಜಿನಲ್ಲಿ ಗಣಿತದಲ್ಲಿ ಇತ್ತೀಚಿನ ಬೆಳವಣಿಗೆ ಬಗ್ಗೆ ಅಂತರರಾಷ್ಟ್ರೀಯ ಸಮ್ಮೇಳನ

ಮೈಸೂರು ದಿ. 24: ಇದೇ ದಿನಾಂಕ 26 ಮತ್ತು 27 ಡಿಸೆಂಬರ್ 2014ರಂದು ಊಟಿ ರಸ್ತೆಯ ಜೆಎಸ್‌ಎಸ್ ಕಾಲೇಜಿನಲ್ಲಿ ಯುಜಿಸಿ ಪ್ರಾಯೋಜಕತ್ವದ ಎರಡು ದಿನಗಳ ಅಂತರರಾಷ್ಟ್ರೀಯ ಸಮ್ಮೇಳನವನ್ನು ಗಣಿತಶಾಸ್ತ್ರ ವಿಭಾಗವು ವ್ಯವಸ್ಥೆಗೊಳಿಸಿದೆ. ಈ ಎರಡು ದಿನಗಳಲ್ಲಿ 'Mathematics - Yesterday and Today' (ICMYT-2014) ಶೀರ್ಷಿಕೆಯಡಿಯಲ್ಲಿ ಟರ್ಕಿ, ದಕ್ಷಿಣ ಕೋರಿಯಾ ದೇಶಗಳ ವಿಶ್ವಖ್ಯಾತಿಯ ಗಣಿತಶಾಸ್ತ್ರಜ್ಞರು ಮತ್ತು ದೇಶದ ವಿವಿಧ ವಿಶ್ವವಿದ್ಯಾನಿಲಯಗಳ ಪ್ರಖ್ಯಾತ ಗಣಿತಶಾಸ್ತ್ರಜ್ಞರು ಸಂಪನ್ಮೂಲ ವ್ಯಕ್ತಿಗಳಾಗಿ ಇತ್ತೀಚಿನ ಬೆಳವಣಿಗೆಗಳು ಮತ್ತು ಇತರ ವಿಜ್ಞಾನಗಳಲ್ಲಿ ಅವುಗಳ ಅನ್ವಯ ಕುರಿತು ಪ್ರೌಢ ಪ್ರಬಂಧಗಳನ್ನು ಮಂಡಿಸಿ ಚರ್ಚೆಗಳಲ್ಲಿ ಭಾಗವಹಿಸಲಿದ್ದಾರೆ.

ದೇಶದ ವಿವಿಧ ಭಾಗಗಳಿಂದ ಮತ್ತು ವಿದೇಶಗಳಿಂದ 200ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸುವ ಸಮ್ಮೇಳನವನ್ನು 26ರಂದು ಬೆಳಿಗ್ಗೆ 10.00 ಗಂಟೆಗೆ ವಿಜಾಪುರದ ಬಿ.ಎಲ್.ಡಿ.ಇ. ವಿಶ್ವವಿದ್ಯಾಲಯದ ಕುಲಪತಿ ಡಾ. ಬಿ.ಜಿ. ಮೂಲಿಮನಿಯವರು ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕರಾದ ಪ್ರೊ. ಟಿ.ಡಿ. ಸುಬ್ಬಣ್ಣನವರ ಅಧ್ಯಕ್ಷತೆಯಲ್ಲಿ ಉದ್ಘಾಟಿಸುವರು. ದಕ್ಷಿಣ ಕೋರಿಯಾದ ಕ್ವಾಂಗ್‌ವೂನ್ ವಿಶ್ವವಿದ್ಯಾಲಯದ ಗಣಿತಶಾಸ್ತ್ರ ಪ್ರಾಧ್ಯಾಪಕರಾದ ಡಾ. ಟಿ. ಕಿಮ್‌ರವರು ಮುಖ್ಯ ಅತಿಥಿಗಳಾಗಿರುತ್ತಾರೆ ಎಂದು ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕ ಪ್ರೊ. ಬಿ.ವಿ. ಸಾಂಬಶಿವಯ್ಯ, ಪ್ರಾಚಾರ್ಯ ಪ್ರೊ. ಎಂ.ಬಿ. ಮಲ್ಲಿಕಾರ್ಜುನ ಪಂಡಿತ್ ಮತ್ತು ಸಮ್ಮೇಳನದ ಸಂಯೋಜನಾ ಕಾರ್ಯದರ್ಶಿ ಪ್ರೊ. ಎಸ್. ಲಿಂಗಣ್ಣನವರು ಜಂಟಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

–ಸಹಿ–
(ಎಂ.ಬಿ. ಮಲ್ಲಿಕಾರ್ಜುನ ಪಂಡಿತ್)
ಪ್ರಾಂಶುಪಾಲರು